ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ
"ಸಾರಿಗೆ ಭವನ" ಕೇಂದ್ರ ಕಛೇರಿ,
ಕೆ.ಹೆಚ್.ರಸ್ತೆ, ಶಾಂತಿನಗರ, ಬೆಂಗಳೂರು-560 027. ಭಾರತ
ದೂರವಾಣಿ : 080-22221321 / 22221325
ವೆಬ್-ಸೈಟ್ : www.ksrtc.in

**Karnataka State Road Transport Corporation**
"Transport House" Central Offices,
K.H.Road, Shanthinagar, Bangalore-560 027. India
Tel : 080-22221321 / 25
Website : www.ksrtc.in

ಕರಾಸ:ಕೇಕ:ಆಡಳತ:ಸೇನಿ:/ 262 /15-16 ದಿನಾಂಕ: 23-02-2016

## ಸುತ್ತೋಲೆ ಸಂಖ್ಯೆ: 1579

(ಸೇವಾ ನಿಯಮ ಶಾಖೆಯಿಂದ ಹೊರಡಿಸಲಾಗಿದೆ)

----

ವಿಷಯ: ಕರಾರಸಾ ನಿಗಮ(ಪದವೃಂದ ಮತ್ತು ನೇಮಕಾತಿ)ನಿಯಮಾವಳಿ 1982ರ ನಿಯಮಾವಳಿ 3(2) ರ ಷೆಡ್ಯೂಲ್'ಎ'ಗೆ ತಿದ್ದುಪಡಿ ಕುರಿತಂತೆ.

ಉಲ್ಲೇಖ: ಸುತ್ತೋಲೆ ಸಂಖ್ಯೆ: 1564 ದಿನಾಂಕ: 26.09.2015.

- ----

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ 1 ರ ಸುತ್ತೋಲೆಯಲ್ಲಿ ಕರಾರಸಾ ಸಂಸ್ಥೆಯ (ಪದವೃಂದ ಮತ್ತು ನೇಮಕಾತಿ) ನಿಯಮಾವಳಿ 1982ರ ನಿಯಮಾವಳಿ 3(2) ರ ಷೆಡ್ಯೂಲ್ 'ಎ' ಅಡಿ ಇರುವ ಕಾರ್ಮಿಕ ಇಲಾಖೆಯ ಕ್ಯಾಟಗರಿ 1 ರಡಿಯಲ್ಲಿ ಮುಖ್ಯ ಕಾರ್ಮಿಕ ಮತ್ತು ಕಲ್ಯಾಣಾಧಿಕಾರಿ (ದರ್ಜೆ-1 ಆಯ್ಕೆ ಶ್ರೇಣಿ) ಹುದ್ದೆಯನ್ನು ಸೃಜಿಸಿ ಮುಖ್ಯ ಕಾರ್ಮಿಕ ಮತ್ತು ಕಲ್ಯಾಣಾಧಿಕಾರಿ (ದರ್ಜೆ-1 ಆಯ್ಕೆ ಶ್ರೇಣಿ)/(ದರ್ಜೆ-1 ಹಿರಿಯ) ಎಂದು ತಿದ್ದುಪಡಿ ಮಾಡಲಾಗಿರುತ್ತದೆ.

ಆದರೆ, ಕರಾರಸಾ ಸಂಸ್ಥೆಯ (ಪದವೃಂದ ಮತ್ತು ನೇಮಕಾತಿ) ನಿಯಮಾವಳಿ 1982ರ ನಿಯಮಾವಳಿ 3(2)ರ ಷೆಡ್ಯೂಲ್ 'ಎ' ರಲ್ಲಿ ಒಂದೇ ಕ್ಯಾಟಗಿರಿಯಲ್ಲಿ ಮೇಲ್ಕಂಡಂತೆ ಎರಡೂ ಶ್ರೇಣಿಗಳ ಹುದ್ದೆಗಳನ್ನು ಸೇರಿಸಲು ಅವಕಾಶವಿರುವುದಿಲ್ಲ. ಈ ಹಿನ್ನೆಲೆಯಲ್ಲಿ ಕ್ಯಾಟಗಿರಿ 1 ರಡಿಯಲ್ಲಿ ಈಗಾಗಲೇ ಸೃಜಿಸಿರುವ ಮುಖ್ಯ ಕಾರ್ಮಿಕ ಮತ್ತು ಕಲ್ಯಾಣಾಧಿಕಾರಿ (ದರ್ಜೆ-1 ಆಯ್ಕೆ ಶ್ರೇಣಿ) ಹುದ್ದೆಯನ್ನು ಮುಂದುವರೆಸಿ, ಪ್ರಸ್ತುತ ಇರುವ ಮುಖ್ಯ ಕಾರ್ಮಿಕ ಮತ್ತು ಕಲ್ಯಾಣಾಧಿಕಾರಿ (ದರ್ಜೆ-1 ಹಿರಿಯ) ಹುದ್ದೆಯ ಪದನಾಮವನ್ನು ಜಂಟಿ ಮುಖ್ಯ ಕಾರ್ಮಿಕ ಮತ್ತು ಕಲ್ಯಾಣಾಧಿಕಾರಿ (ದರ್ಜೆ-1 ಹಿರಿಯ) ಎಂದು ಬದಲಾಯಿಸಿ ಕ್ಯಾಟಗಿರಿ 1 'ಎ' ರಲ್ಲಿ ಸೇರಿಸಿ ತಿದ್ದುಪಡಿ ಮಾಡಲಾಗಿದೆ. ಅದರಂತೆ ಹೊರಡಿಸಿರುವ ಅಧಿಸೂಚನೆಯನ್ನು ಸುತ್ತೋಲೆಗೆ ಲಗತ್ತಿಸಿದ್ದು ಈ ಸಂಬಂಧ ಈ ಹಿಂದೆ ಹೊರಡಿಸಲಾದ ಸುತ್ತೋಲೆ ಸಂಖ್ಯೆ: 1564, ದಿನಾಂಕ: 26-09-2015 ನ್ನು ಹಿಂಪಡೆಯಲಾಗಿದೆ.

ಸಂಬಂಧಪಟ್ಟವರೆಲ್ಲರೂ ಮೇಲಿನ ತಿದ್ದುಪಡಿಗಳನ್ನು ಅಧಿಸೂಚನೆಯಲ್ಲಿ ವಿವರಿಸಿರುವಂತೆ ಮನದಟ್ಟು ಮಾಡಿಕೊಂಡು ಅದರಂತೆ ಕ್ರಮ ಕೈಗೊಳ್ಳತಕ್ಕದ್ದು.

ಈ ಸುತ್ತೋಲೆಯು ತಕ್ಷಣದಿಂದ ಜಾರಿಗೆ ಬರುತ್ತದೆ.

ಅಡಕ: ಮೇಲಿನಂತೆ.

(ರಾಜೇಂದರ್ ಕುಮಾರ ಕಟಾರಿಯಾ)
ವ್ಯವಸ್ಥಾಪಕ ನಿರ್ದೇಶಕರು

<u>ಪ್ರತಿ ಮಾಹಿತಿಗಾಗಿ:</u>

1. ಅಧ್ಯಕ್ಷರು/ಉಪಾಧ್ಯಕ್ಷರು, ಕರಾರಸಾ ನಿಗಮ ರವರ ಆಪ್ತ ಕಾರ್ಯದರ್ಶಿಯವರಿಗೆ.
2. ವ್ಯವಸ್ಥಾಪಕ ನಿರ್ದೇಶಕರು, ಬೆಂಮಸಾಸಂಸ್ಥೆ/ವಾಕರಸಾಸಂಸ್ಥೆ/ಈಕರಸಾಸಂಸ್ಥೆ ರವರಿಗೆ.
3. ನಿರ್ದೇಶಕರು(ಸಿ:ಪ)/ ನಿರ್ದೇಶಕರು(ಭ:ಜಾ), ಕರಾರಸಾ ನಿಗಮ, ರವರಿಗೆ.

<u>ಪ್ರತಿ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ:</u>

4. ಎಲ್ಲಾ ಇಲಾಖಾ ಮುಖ್ಯಸ್ಥರುಗಳು, ಕರಾರಸಾ ನಿಗಮ ರವರುಗಳಿಗೆ.
5. ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು (ನೇಮಕ), ಕರಾರಸಾ ನಿಗಮ/ ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು, ಬೆಂಮಸಾ ಸಂಸ್ಥೆ/ವಾಕರಸಾ ಸಂಸ್ಥೆ/ಈಕರಸಾ ಸಂಸ್ಥೆ ರವರಿಗೆ.
6. ಉಪ ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು, ಕರಾರಸಾ ನಿಗಮ. ಕೇಂದ್ರ ಕಛೇರಿ, ಬೆಂಗಳೂರು ರವರಿಗೆ.
7. ಮುಖ್ಯ ಭದ್ರತಾ ಮತ್ತು ಜಾಗ್ರತಾಧಿಕಾರಿಗಳು, ಕರಾರಸಾ ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರಿಗೆ ಸುತ್ತೋಲೆಯನ್ನು ಕೇಂದ್ರ ಕಛೇರಿಯ ಸೂಚನಾ ಫಲಕದಲ್ಲಿ ಪ್ರದರ್ಶಿಸಿ. ಪ್ರದರ್ಶಿತಗೊಂಡ ಬಗ್ಗೆ ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು (ಸಿಬ್ಬಂದಿ) ರವರಿಗೆ ವರದಿ ಸಲ್ಲಿಸುವುದು.
8. ಮುಖ್ಯ ಗಣಕ ವ್ಯವಸ್ಥಾಪಕರು, ಕರಾರಸಾ ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರಿಗೆ ಸುತ್ತೋಲೆಯನ್ನು ನಿಗಮದ ಅಧಿಕೃತ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.
9. ಪ್ರಧಾನ ಕಛೇರಿ ಪತ್ರ ಕಡತ.